18

11.4.21

ತುರ್ತು ನಿಗಾ ಘಟಕದಲ್ಲಿ 405 ಮಂದಿಗೆ ಚಿಕಿತ್ಸೆ  6,955 ಹೊಸ ಪ್ರಕರಣ ದೃಢ, ಶನಿವಾರ 36 ಮಂದಿ ಸಾವು

# ರಾಜ್ಯದಲ್ಲಿ ಐಸಿಯು ರೋಗಿಗಳ ಸಂಖ್ಯೆ ದಿನೇದಿನ ಏರಿಕೆ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕೋವಿಡ್ ಎರಡನೇ ಅಲೆಯಲ್ಲಿ ಸೋಂಕಿಗೆ ಒಳಗಾಗುತ್ತಿರುವ ರೋಗಿಗಳಲ್ಲಿ ಹೆಚ್ಚಿನವರು ಗಂಭೀರ ಸಮಸ್ಯೆಗೆ ಒಳಗಾಗುತ್ತಿದ್ದು, ಇದರಿಂದ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುವವರ ಸಂಖ್ಯೆ 405ಕ್ಕೆ ಏರಿಕೆಯಾಗಿದೆ. ಬೆಂಗಳೂರಿನಲ್ಲಿ 169, ಕಲಬುರಗಿ 44, ಕೋಲಾರ 33, ಮೈಸೂರು 23, ತುಮಕೂರು 17, ದಕ್ಷಿಣ ಕನ್ನಡ 14, ಮಂಡ್ಯ, ಧಾರವಾಡ, ಬೀದರ್ ತಲಾ 13, ಉಡುಪಿ 10 ಸೇರಿ ರಾಜ್ಯಾದ್ಯಂತ 405 ಮಂದಿ ಗಂಭೀರ ಸಮಸ್ಯೆಯಿಂದಾಗಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ರಾಜ್ಯದಲ್ಲಿ ಶನಿವಾರ 36 ಸೋಂಕಿತರು ಸಾವನ್ನಪ್ಪಿದ್ದು, ಮೃತರ ಸಂಖ್ಯೆ 12,849ಕ್ಕೆ ತಲುಪಿದೆ. 6,955 ಹೊಸ ಸೋಂಕು ಪ್ರಕರಣಗಳು ವರದಿಯಾಗಿದ್ದು, ದಿನದ ಸೋಂಕು ಪ್ರಮಾಣ ದರ ಶೇ.7.04ಕ್ಕೆ ಏರಿಕೆಯಾಗಿದೆ. ಒಟ್ಟು ಸೋಂಕಿತರ ಸಂಖ್ಯೆ 10.55 ಲಕ್ಷ ಮೀರಿದ್ದು, ಸಕ್ರಿಯ ಪ್ರಕರಣಗಳ ಸಂಖ್ಯೆ 61,653ಕ್ಕೆ ಏರಿದೆ. 3,350 ಮಂದಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದು, ಗುಣಮುಖರ ಸಂಖ್ಯೆ 9.80 ಲಕ್ಷ ದಾಟಿದೆ.

**ಜಿಲ್ಲೆಗಳಲ್ಲಿ ಹೆಚ್ಚಿದ ಸೋಂಕು:** ಬೆಂಗಳೂರು ನಗರದಲ್ಲಿ 4,383, ಕಲಬುರಗಿ 276, ಮೈಸೂರು 266, ಬೀದರ್ 215, ತುಮಕೂರು 206, ದಕ್ಷಿಣ ಕನ್ನಡ 137, ಬೆಂಗಳೂರು ಗ್ರಾಮಾಂತರ 152, ಕೋಲಾರ 121, ಮಂಡ್ಯ 119, ಹಾಸನ 100 ಸೇರಿ ಹತ್ತು ಜಿಲ್ಲೆಗಳಲ್ಲಿ ಸೋಂಕು ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ.

**56.26 ಲಕ್ಷ ಡೋಸ್ ವಿತರಣೆ:** ರಾಜ್ಯದಲ್ಲಿ ಶನಿವಾರ ಒಂದೇದಿನ 4,915 ಕೇಂದ್ರಗಳಲ್ಲಿ ಕೋವಿಡ್ ಲಸಿಕೆ ಅಭಿಯಾನ ನಡೆದಿದ್ದು, 1.17 ಲಕ್ಷ ಮಂದಿಗೆ ಲಸಿಕೆ ನೀಡಲಾಗಿದೆ. ಇದರೊಂದಿಗೆ ರಾಜ್ಯದಲ್ಲಿ ಈವರೆಗೂ 56.26 ಲಕ್ಷ ಡೋಸ್ ಲಸಿಕೆ ವಿತರಿಸಲಾಗಿದೆ.

## ಸಚಿವ ಕೋಟಗೆ ಕರೊನಾ

ಮಂಗಳೂರು: ಧಾರ್ಮಿಕ ದತ್ತಿ ಸಚಿವ ಕೋಟ ಶ್ರೀನಿವಾಸ ಪೂಜಾರಿ ಅವರಿಗೆ ಕೋವಿಡ್-19 ದೃಢಪಟ್ಟಿದ್ದು, ಆಸ್ಪತ್ರೆಗೆ ದಾಖಲಾಗಿದ್ದಾರೆ. ಅನಿವಾರ್ಯವಾದರೆ ದೂರವಾಣಿ ಮೂಲಕ ಸಂಪರ್ಕಿಸಬಹುದು. 1-2 ದಿನಗಳಿಂದ ನನ್ನ ಸಂಪರ್ಕಕ್ಕೆ ಬಂದವರು ಪರೀಕ್ಷೆ ಮಾಡಿಸಿಕೊಳ್ಳಿ ಎಂದು ಸಚಿವರು ಟ್ವೀಟ್ ಮೂಲಕ ಮನವಿ ಮಾಡಿದ್ದಾರೆ.

ಕರೊನಾ ಎಮರ್ಜೆನ್ಸಿ EMERGENCY

## 8 ನಗರಗಳಲ್ಲಿ ನೈಟ್ ಕರ್ಫ್ಯೂ

ಬೆಂಗಳೂರು: ಕೊರೊನಾ 2ನೇ ಅಲೆ ನಿಯಂತ್ರಿಸುವ ಸಲುವಾಗಿ ಬೆಂಗಳೂರು ಸೇರಿ ರಾಜ್ಯದ 8 ಜಿಲ್ಲೆಗಳಲ್ಲಿ ಶನಿವಾರ ರಾತ್ರಿಯಿಂದ ನೈಟ್ ಕರ್ಫ್ಯೂ ಜಾರಿಗೊಳಿಸಲಾಗಿದೆ. ಬೆಂಗಳೂರು, ಮೈಸೂರು, ದಕ್ಷಿಣ ಕನ್ನಡ, ಉಡುಪಿ, ಮಣಿಪಾಲ, ಬಳ್ಳಾರಿ, ತುಮಕೂರು, ಕಲಬುರಗಿ ಜಿಲ್ಲೆಗಳಲ್ಲಿ ರಾತ್ರಿ 10 ಗಂಟೆಯ ನಂತರ ಬಹುತೇಕ ಚಟುವಟಿಕೆ ಸ್ತಬ್ಧವಾಗಿತ್ತು. ಸರ್ಕಾರದ ಮಾರ್ಗಸೂಚಿ ಪ್ರಕಾರ ಅತ್ಯಾವಶ್ಯಕ ಸೇವೆಗಳನ್ನು ಹೊರತುಪಡಿಸಿ ಉಳಿದ ಸೇವೆಗಳು ಈ ಅವಧಿಯಲ್ಲಿ ಕಾರ್ಯ ನಿರ್ವಹಿಸುವುದನ್ನು ಸರ್ಕಾರ ನಿರ್ಬಂಧಿಸಿದೆ. ಹೀಗಾಗಿ ನೈಟ್‌ಕರ್ಫ್ಯೂ ಅವಧಿಯಲ್ಲಿ ಸುಖಾ-ಸುಮ್ಮನೆ ಓಡಾಡುವಂತಿಲ್ಲ. ಕೆಲ ನಗರಗಳಲ್ಲಿ ಅನಗತ್ಯವಾಗಿ ಓಡಾಡುತ್ತಿದ್ದವರಿಗೆ ಪೊಲೀಸರು ಎಚ್ಚರಿಕೆ ನೀಡಿ ಕಳುಹಿಸಿದ್ದಾರೆ.

**ನೌಕರರಿಗೆ ಅವಕಾಶ:** ರಾತ್ರಿ ಪಾಳಿಯಲ್ಲಿ ಕೆಲಸ ಮಾಡುವ ಉದ್ಯೋಗಿಗಳು ಸಂಸ್ಥೆಯ ಅಧಿಕೃತ ಸೀಲನ್ನು ಹೊಂದಿರುವ ಅನುಮತಿ ಪತ್ರ ಹಾಗೂ ಕಚೇರಿಯ ಗುರುತಿನ ಚೀಟಿ ತೋರಿಸಿ ಸಂಚರಿಸಲು ರಾಜ್ಯ ಸರ್ಕಾರ ಅವಕಾಶ ಕಲ್ಪಿಸಿದೆ. ಆದರೆ, ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಪಾಡುವುದು ಸೇರಿ ಕರೊನಾ ನಿಯಮ ಪಾಲಿಸುವುದು ಕಡ್ಡಾಯವಾಗಿದೆ.



ಮೈಸೂರಿನಲ್ಲಿ ಶನಿವಾರ ರಾತ್ರಿ ಕರೊನಾ ಕರ್ಫ್ಯೂ ಮೇಲುಸ್ತುವಾರಿ ವಹಿಸಿ ಮೈಸೂರು ಕಮಿಷನರ್ ಚಂದ್ರಗುಪ್ತ, ಡಿಸಿಪಿ ಪ್ರಕಾಶ್‌ಗೌಡ ಕುದುರೆ ಮೇಲೆ ಗಸ್ತು ತಿರುಗಿದರು.

ರಾಜ್ಯ ಸರ್ಕಾರ ರಾತ್ರಿ ಕರ್ಫ್ಯೂ ವಿಧಿಸಿರುವ ಕ್ರಮ ಕರೊನಾ ಓಡಿಸಲು ತಟ್ಟೆ ಬಡಿಯಲು ಪ್ರಧಾನಿ ನರೇಂದ್ರ ಮೋದಿ ನೀಡಿದ್ದ ಕರೆಯಷ್ಟೇ ಬಾಲಿಶ ನಿರ್ಧಾರ. ರಾತ್ರಿ ತೆರೆದಿರುವ ಹೋಟೆಲ್, ಚಿತ್ರಮಂದಿರ ಮತ್ತು ಅಂಗಡಿ ಮುಂಗಟ್ಟುಗಳನ್ನು ಮುಚ್ಚಿದರೆ ಸಾಲದ?

[illegible], ಪ್ರತಿಪಕ್ಷ ನಾಯಕ

## ಸರ್ಕಾರದ ನಡೆಗೆ ಕಾಂಗ್ರೆಸ್ ವ್ಯಂಗ್ಯ

ರಾತ್ರಿ ಕರ್ಫ್ಯೂ ಎಂಬುದು ಸರ್ಕಾರದ ಬೌದ್ಧಿಕ ದಿವಾಳಿತನಕ್ಕೆ ಸಾಕ್ಷಿಯಾಗಿದೆ. ಕರೊನಾ ಎರಡನೇ ಅಲೆಯ ಪ್ರಾರಂಭದಲ್ಲಿಯೇ ಸಮರ್ಪಕ ಪರೀಕ್ಷೆಗಳನ್ನು ನಡೆಸಲಿಲ್ಲ. ಸೋಂಕಿತರ ಸಂಪರ್ಕಕ್ಕೆ ಬಂದವರನ್ನು ಟ್ರೇಸ್ ಮಾಡಲಿಲ್ಲ, ಐಸೋಲೇಶನ್ ನಿಯಮಗಳನ್ನು ಪಾಲಿಸಲಿಲ್ಲ. ಈಗ ರಾತ್ರಿ ಕರ್ಫ್ಯೂ ಎಂಬ ಉಪಯೋಗಕ್ಕೆ ಬಾರದ ನಾಟಕ ಶುರು ಮಾಡಿದೆ ಎಂದು ಕಾಂಗ್ರೆಸ್ ಲೇವಡಿ ಮಾಡಿದೆ.